ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 123 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:12.04.2016

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

"ಮೊದಲ ಆದ್ಯತೆ"

ಇವರಿಗೆ:

ಹಿರಿಯ ತಾಂತ್ರಿಕ ನಿರ್ದೇಶಕರು,
ಎನ್.ಐ.ಸಿ.,
ಬೆಂಗಳೂರು.

ಮಾನ್ಯರೆ,

**ವಿಷಯ:** ಪಂಚತಂತ್ರದಲ್ಲಿ ಬಿಟ್ಟು ಹೋಗಿರುವ ಆಸ್ತಿಗಳನ್ನು ಸೇರ್ಪಡೆ ಮಾಡಲು ಹಾಗೂ ತೆರಿಗೆ ವಿವರಗಳನ್ನು ಬದಲಾವಣೆ ಮಾಡಲು ಅವಕಾಶ ಕಲ್ಪಿಸುವ ಬಗ್ಗೆ.

**ಉಲ್ಲೇಖ:** ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ 14.03.2016

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 25.01.2016 ರಂದು ನಡೆದ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿಗಳ ಸಭೆಯ ನಿರ್ಣಯದಂತೆ ಗ್ರಾಮ ಪಂಚಾಯತಿಗಳು ಪಂಚತಂತ್ರ ತಂತ್ರಾಂಶದಲ್ಲಿ ನಮೂದಿಸದೆ ಇರುವ ನಿಯಮಾನುಸಾರವಿರುವ ಆಸ್ತಿಗಳನ್ನು ದಾಖಲಿಸಲು ಹಾಗೂ ಆಸ್ತಿ ವಿವರಗಳನ್ನು ಬದಲಾವಣೆ ಮಾಡಲು (DCB Modification) ಪಂಚತಂತ್ರ ಹಾಗೂ ಇ-ಸ್ವತ್ತು ತಂತ್ರಾಂಶದಲ್ಲಿ ದಿನಾಂಕ 05.04.2016 ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಬೆಂಗಳೂರು ನಗರ ಹಾಗೂ ಇತರೆ ಜಿಲ್ಲಾ ಪಂಚಾಯತಿಗಳಿಂದ ವರ್ಷಾಂತ್ಯದ ಕಾರ್ಯಒತ್ತಡದಿಂದ ಗ್ರಾಮ ಪಂಚಾಯತಿಗಳಿಗೆ ದಾಖಲು ಮಾಡಲು ಸಮಯಾವಕಾಶ ಬೇಕಾಗಿದ್ದು, ಮತ್ತಷ್ಟು ಕಾಲಾವಕಾಶ ಕೋರಿರುವುದರಿಂದ ದಿನಾಂಕ 30.04.2016 ರವರೆಗೆ ಸದರಿ ತಂತ್ರಾಂಶಗಳಲ್ಲಿ ದಾಖಲಿಸಲು ಅವಕಾಶ ಕಲ್ಪಿಸಬೇಕಾಗಿ ಕೋರಿದೆ.

ನಿಮ್ಮ ನಂಬುಗೆಯ,

(ಕೆ.ಯಾಲಕ್ಕಿಗೌಡ) 13/4/16
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.